ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1564 (1838)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ವಿಷಯ : ಪದವಿ ಕಾಲೇಜುಗಳ ಕುರಿತು

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು) ಹೊಸದಾಗಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಲು ಅಗತ್ಯವಾದ ಮಾನದಂಡಗಳು ಯಾವುವು ; (ಸುತ್ತೋಲೆಯ ಪ್ರತಿಯನ್ನು ಒದಗಿಸುವುದು)

(ಆ) ಉಡುಪಿ ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಬೋಧಿಸಲ್ಪಡುವ ವಿಷಯಗಳು ಯಾವುವು ; ಅವುಗಳ ವಿದ್ಯಾರ್ಥಿಗಳ ಸೀಟ್ ಸಾಮರ್ಥ್ಯ ಎಷ್ಟು ; ಖಾಲಿಯಿರುವ ಸೀಟ್‌ಗಳ ಸಂಖ್ಯೆ ಎಷ್ಟು; ಹೆಚ್ಚುವರಿ ಸೀಟ್‌ನ ಬೇಡಿಕೆ ಇದೆಯೇ ; ಈ ಕಾಲೇಜುಗಳಿಗೆ ಮಂಜೂರಾತಿಯಾದ ಹುದ್ದೆಗಳು ಯಾವುವು ಮತ್ತು ಕೊರತೆಯಿರುವ ಹುದ್ದೆಗಳು ಯಾವುವು ; ಕೊರತೆಯನ್ನು ಯಾವಾಗ ತುಂಬಲಾಗುವುದು ; (ತಾಲ್ಲೂಕುವಾರು, ಕಾಲೇಜುವಾರು ಮಾಹಿತಿಯನ್ನು ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿರುವ ಖಾಸಗಿ ಪ್ರಥಮ ದರ್ಜೆ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಭೋಧಿಸಲ್ಪಡುವ ವಿಷಯಗಳು ಯಾವುವು ; ಅವುಗಳ ವಿದ್ಯಾರ್ಥಿಗಳ ಸೀಟ್ ಸಾಮರ್ಥ್ಯ ಎಷ್ಟು ; ಖಾಲಿಯಿರುವ ಸೀಟ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಕಾಲೇಜುವಾರು ಮಾಹಿತಿಯನ್ನು ನೀಡುವುದು)

(ಈ) ಬಹುತೇಕ ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳು ನಗರ ಕೇಂದ್ರಿತವಾಗಿರುವುದರಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಗ್ರಾಮೀಣ ಪ್ರದೇಶದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ? (ಹೌದಾದರೆ, ಉಡುಪಿ ಜಿಲ್ಲೆಯ ಪ್ರಸ್ತಾವಿತ ಕಾಲೇಜುಗಳ ಕುರಿತು ಮಾಹಿತಿಯನ್ನು ನೀಡುವುದು)